Application of sub-section (4) of Section 29A of the Karnataka Co-operative Societies Act, 1959 to the District Central Co-operative Bank Limited, Chickmangalur with following modification :
"The word within 15 days" are modified as after "30 days and within 45 days".

2. Notification No. CMW 515 LM 91 Dated 18–1–92
Exemption of Rayabag Co-operative Sakkare Karkhane Limited, Rayabag from the provisions of Section 27 of the Karnataka Co-operative Societies Act, 1959 till may, 1992.
as required under Section 130 of the Karnataka Co-operative Societies Act, 1959.

ಶ್ರೀ ಎಂ. ಮಲ್ಲಿಕಾರ್ಜುನ ಖರ್ಗೆ ಮಾನ್ಯ ಉಪಾಧ್ಯಕ್ಷಣಿಯವರೇ, ನಾನೊಂದು ಚಿಕ್ಕ ಸ್ಟೇಟ್‌ಮೆಂಟ್‌ನ್ನು ಮಾಡಬೇಕಾಗಿದೆ. ತಾವು ಅನುಮತಿ ಕೊಟ್ಟರೆ....

ಉಪಾಧ್ಯಕ್ಷಣಿಯವರು : ಅರ್ಜಿಗಳನ್ನು ಒಪ್ಪಿಸುವುದು ಇದೆ. ಮಾನ್ಯ ಸದಸ್ಯರುಗಳಾದ ಶ್ರೀ ಪೌಕಲ್ ಎಂ. ಮಲ್ಲಪ್ಪ ಹಾಗೂ ಶ್ರೀ ವಸಂತ್ ವಿ. ಸಾಲಿಯಾನ ಅವರುಗಳು ಸಭೆಯಲ್ಲಿಲ್ಲ. ಈಗ ಮುಂದಿನ ವಿಷಯ ವರದಿಗಳನ್ನು ಒಪ್ಪಿಸುವುದು.

ವರದಿಗಳನ್ನೊಪ್ಪಿಸುವುದು

ಶ್ರೀ ಜೆ. ರಾಮಕೃಷ್ಣ (ಅಧ್ಯಕ್ಷರು, ಸಾರ್ವಜನಿಕ ಉದ್ದಿಮೆಗಳ ಸಮಿತಿ) : ಮಾನ್ಯ ಉಪಾಧ್ಯಕ್ಷರೇ, ಸಾರ್ವಜನಿಕ ಉದ್ದಿಮೆಗಳ ಸಮಿತಿಯ 53ನೇ ವರದಿಯನ್ನು ಸಭೆಗೆ ಒಪ್ಪಿಸುತ್ತೇನೆ.

ಶ್ರೀ ಎಂ.ಎಲ್. ಖುಸ್ರಾದ್ (ಸಮಿತಿಯ ಅಧ್ಯಕ್ಷರು) : ಮಾನ್ಯ ಉಪಾಧ್ಯಕ್ಷರೇ, ಸಣ್ಣ ಖನಿಜ ಸಂಪತ್ತಿನ ನೀತಿಯನ್ನು ಸೂಕ್ತವಾಗಿ ರೂಪಿಸುವುದನ್ನು ಖಚಿತಪಡಿಸಿಕೊಳ್ಳುವುದಕ್ಕಾಗಿ ಸರ್ಕಾರಕ್ಕೆ ಸಲಹೆ ನೀಡಲು ರಚಿಸಲಾದ ಉಭಯ ಸದನಗಳ ಜಂಟಿ ಸಮಿತಿಯ ಮಧ್ಯಕಾಲಿಕ ವರದಿಯನ್ನು ಸಭೆಗೆ ಒಪ್ಪಿಸುತ್ತೇನೆ.

ಉಪಾಧ್ಯಕ್ಷಣಿಯವರು : ವರದಿಗಳನ್ನು ಒಪ್ಪಿಸಲಾಯಿತು.

ಶಾಸನ ರಚನೆ

ಕರ್ನಾಟಕ ಸರಕುಗಳ ಮೇಲಣ ತೆರಿಗೆ (ತಿದ್ದುಪಡಿ) ವಿಧೇಯಕ, 1992 ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಎಸ್. ಬಂಗಾರಪ್ಪ (ಮುಖ್ಯಮಂತ್ರಿ) : ಮಾನ್ಯ ಅಧ್ಯಕ್ಷರೇ, ಕರ್ನಾಟಕ ಸರಕುಗಳ ಮೇಲಣ ತೆರಿಗೆ (ತಿದ್ದುಪಡಿ) ವಿಧೇಯಕ, 1992ನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ.

ಉಪಾಧ್ಯಕ್ಷಣಿಯವರು : ಪ್ರಸ್ತಾವ ಏನೆಂದರೆ "1992ರ ಕರ್ನಾಟಕ ಸರಕುಗಳ ಮೇಲಣ ತೆರಿಗೆ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು".

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು

ಶ್ರೀ ಎಸ್. ಬಂಗಾರಪ್ಪ (ಮುಖ್ಯಮಂತ್ರಿ) : ಮಾನ್ಯ ಅಧ್ಯಕ್ಷರೇ, "ಕರ್ನಾಟಕ ಸರಕುಗಳ ಮೇಲಣ ತೆರಿಗೆ (ತಿದ್ದುಪಡಿ) ವಿಧೇಯಕ, 1992" ಅನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಉಪಾಧ್ಯಕ್ಷಣಿಯರು : ವಿಧೇಯಕವನ್ನು ಮಂಡಿಸಲಾಗಿದೆ.